ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001.
ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 07-03-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆ, ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಇತರೆ ಪ್ರಶಸ್ತಿಗಳ ಪ್ರದಾನ ಸಮಾರಂಭ.<br>ಪ್ರಶಸ್ತಿ ಪ್ರದಾನ:<br>ಶ್ರೀ ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು<br>ಶ್ರೀಮತಿ ಉಮಾಶ್ರೀ,<br>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನ, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವರು. | 08-03-2015<br>ಭಾನುವಾರ<br>ಬೆಳಿಗ್ಗೆ<br>11-00 ಗಂಟೆಗೆ | ಕಂಠೀರವ ಒಳಾಂಗಣ ಕ್ರೀಡಾಂಗಣ, ಕಸ್ತೂರಿ ಬಾ ರಸ್ತೆ, ಕಾರ್ಪೊರೇಷನ್ ವೃತ್ತದ ಬಳಿ, ಬೆಂಗಳೂರು. |
| 2. | ಪತ್ರಿಕಾಗೋಷ್ಠಿ:<br>ಶ್ರೀ ನಾರಾಯಣ, ಅಧ್ಯಕ್ಷರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು | 09-03-2015<br>ಸೋಮವಾರ<br>ಅಪರಾಹ್ನ<br>12-00 ಗಂಟೆಗೆ | ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, 4ನೇ ಮುಖ್ಯ ರಸ್ತೆ, 16ನೇ ಅಡ್ಡರಸ್ತೆ, ಸಂಪಂಗಿರಾಮನಗರ ಪೊಲೀಸ್ ಠಾಣೆ ಎದುರು, ಸಂಪಂಗಿರಾಮನಗರ, ಬೆಂಗಳೂರು – 560 027 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಮುಖ್ಯ ಸಚೇತಕರ ಪ್ರವಾಸ

**ಬೆಂಗಳೂರು, ಮಾರ್ಚ್ 7, (ಕರ್ನಾಟಕ ವಾರ್ತೆ)**

ಕರ್ನಾಟಕ ವಿಧಾನಸಭೆಯ ಸರ್ಕಾರಿ ಮುಖ್ಯ ಸಚೇತಕ ಆಶೋಕ ಮಹಾದೇವಪ್ಪ ಪಟ್ಟಣ್ ಅವರು ಮಾರ್ಚ್ 8 ರಿಂದ 11 ರವರೆಗೆ ಬೆಳಗಾವಿ ಜಿಲ್ಲೆಯಲ್ಲಿ ಪ್ರವಾಸ ಮಾಡುವರು.

**ಬಾಬು:ಜಿಪಿಆರ್**

## ಸೂಕ್ಷ್ಮ ನೀರಾವರಿಗಾಗಿ ಹೊಸ ನೀತಿ

**– ಕೃಷ್ಣಭೈರೇಗೌಡ**

**ಬೆಂಗಳೂರು, ಮಾರ್ಚ್ 7, (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಸೂಕ್ಷ್ಮ ನೀರಾವರಿಗಾಗಿ ಹೊಸ ನೀತಿಯನ್ನು ತರಲು ಸರ್ಕಾರ ಉದ್ದೇಶಿಸಿದೆ ಎಂದು ಕೃಷಿ ಸಚಿವ ಶ್ರೀ ಕೃಷ್ಣಭೈರೇಗೌಡ ತಿಳಿಸಿದರು.

ಕೃಷಿ ಇಲಾಖೆ ನೀರಾವರಿ, ತೋಟಗಾರಿಕೆ ಕೈಗಾರಿಕೆ ಇಲಾಖೆಗಳು ಜಂಟಿಯಾಗಿ ಲಲಿತ್ ಅಶೋಕ್ ಹೋಟೇಲ್‌ನಲ್ಲಿ ಏರ್ಪಡಿಸಿದ್ದ "ಸೂಕ್ಷ್ಮ ನೀರಾವರಿ – ಮುನ್ನೋಟ" ಎಂಬ ವಿಷಯ ಕುರಿತು ಏರ್ಪಡಿಸಿದ್ದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ವ್ಯವಸಾಯದಲ್ಲಿ ನೀರನ್ನು ಮಿತವಾಗಿ ಬಳಸುವ ಉದ್ದೇಶದಿಂದ ಹೊಸ ನೀತಿಯನ್ನು ತರಲು ಉದ್ದೇಶಿಸಲಾಗಿದೆ ಎಂದರು.

ರಾಜ್ಯದಲ್ಲಿ ಶೇಕಡ 84 ರಷ್ಟು ವ್ಯವಸಾಯವನ್ನು ಅಂತರ್‌ಜಲದ ನೀರಿನ ಬಳಕೆಯಿಂದಲೇ ನಡೆಸಲಾಗುತ್ತಿರುವುದರಿಂದ ರಾಜ್ಯದಲ್ಲಿ ಅಂತರ್ ಜಲ ಮಟ್ಟವು ಕುಸಿಯುತ್ತಿದೆ.

ರಾಜ್ಯದ 84 ಲಕ್ಷ ಹೆಕ್ಟೇರ್ ಕೃಷಿ ಭೂಮಿಯಲ್ಲಿ ಕೇವಲ 4 ರಿಂದ 6 ಲಕ್ಷ ಹೆಕ್ಟೇರ್ ಜಮೀನಿನಲ್ಲಿ ಹನಿ ನೀರಾವರಿಯನ್ನು ಅಳವಡಿಸಿಕೊಳ್ಳಲಾಗಿದೆ. ನೆರೆಯ ರಾಜ್ಯಗಳಾದ ಮಹಾರಾಷ್ಟ್ರ, ರಾಜಸ್ಥಾನ, ತಮಿಳುನಾಡಿನಲ್ಲಿ ಸೂಕ್ಷ್ಮ ನೀರಾವರಿಯನ್ನು ಅಳವಡಿಸಿಕೊಂಡು ವ್ಯವಸಾಯವನ್ನು ಮಾಡುತ್ತಿರುವ ಮಾದರಿಯಲ್ಲಿಯೇ ನಮ್ಮ ರಾಜ್ಯದಲ್ಲೂ ಅಳವಡಿಸಿಕೊಳ್ಳುವ ಬಗ್ಗೆ ಅಧಿಕಾರಿಗಳು ಈ ಕಾರ್ಯಾಗಾರದ ಮೂಲಕ ಮಾಹಿತಿಯನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ರಾಜಸ್ಥಾನದ ತರುಣ್ ಭಾರತ್ ಸಂಘದ ಅಧ್ಯಕ್ಷರಾಗಿರುವ ರಾಜೇಂದ್ರಸಿಂಗ್ ಅವರು ರಾಜಸ್ಥಾನದಲ್ಲಿ ನಶಿಸಿಹೋಗಿದ್ದ 7 ನದಿಗಳಿಗೆ ಹೇಗೆ ಮರುಜೀವ ನೀಡಲಾಯಿತು ಮತ್ತು ಅಲ್ಲಿ ಅಂತರ್ ಜಲವನ್ನು ಹೆಚ್ಚಿಸಿದ ಬಗ್ಗೆ ವಿವರಿಸಿದ ಅವರು ನಮ್ಮ ದೇಶದಲ್ಲಿ ಪ್ರಕೃತಿಯನ್ನು ಅರಿಯಲು ಒಂದು ವಿಶ್ವವಿದ್ಯಾಲಯದಿಂದಲೂ ಸಾಧ್ಯವಾಗಿಲ್ಲ ಎಂದರು. .

ಭಾರಿ ಮತ್ತು ಸಣ್ಣ ನೀರಾವರಿ ಸಚಿವರಾದ ಎಂ.ಬಿ. ಪಾಟೀಲ್ ಅವರು ನಮ್ಮ ರಾಜ್ಯದಲ್ಲಿ ಭತ್ತ ಹಾಗೂ ಕಬ್ಬಿನ ಬೆಳೆಗಳಿಗೆ ಹೆಚ್ಚಿನ ನೀರು ವ್ಯಯವಾಗುತ್ತಿದೆ. ಈ ಬೆಳೆಗಳಿಗೂ ' ಸೂಕ್ಷ್ಮ – ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡರೆ ಕನಿಷ್ಠ 200 ಟಿ.ಎಂ.ಸಿ. ನೀರನ್ನು ಉಳಿಸಬಹುದಾಗಿದೆ. ಅಲ್ಲದೆ, ಕೈಗಾರಿಕೆಗಳೂ ತಾವು

ಉಪಯೋಗಿಸಿದ ನೀರನ್ನೇ ಮತ್ತೆ ಮರುಬಳಕೆ ಮಾಡಿಕೊಳ್ಳುವುದರಿಂದ ನೀರು ನಿರುಪಯುಕ್ತವಾಗಿ ಹೋಗುವುದನ್ನು ತಡೆಯಬಹುದಾಗಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಲತಾ ಕೃಷ್ಣರಾವ್, ಕೃಷಿ ಇಲಾಖೆ ಕಾರ್ಯದರ್ಶಿ, ಉಮ ಮಹದೇವನ್, ತೋಟಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೀವ್ ಚಾವ್ಲಾ, ಮಹರಾಷ್ಟ್ರದ ಕೃಷಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಸುಧೀರ್ ಕುಮಾರ್ ಘೋಯಲ್ ಸೇರಿದಂತೆ ಮತ್ತಿತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಪಹೊ/ಬಿಜಿಪಿ:ಜಿಪಿಆರ್./ಕೆಎಂ

**ವಾರ್ತಾ ವಿಶೇಷ:–**

## ಸಫಾಯಿ ಕರ್ಮಚಾರಿಗಳಿಗೆ ಅಗತ್ಯ ನೆರವು

ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಸುಮಾರು 35000 ಗುತ್ತಿಗೆ ಪೌರ ಕಾರ್ಮಿಕರು ಕಳೆದ 15–20 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಇವರಿಗೆ ಕೆಲಸದ ಭದ್ರತೆಯಾಗಲಿ, ಆರೋಗ್ಯದ ಭದ್ರತೆಯಾಗಲಿ, ಸಾಮಾಜಿಕ ಭದ್ರತೆಯಾಗಲಿ ಇರುವುದಿಲ್ಲ. ಈ ಪೌರ ಕಾರ್ಮಿಕರಿಗೆ ಗುತ್ತಿಗೆದಾರರು ಸರಿಯಾದ ಸಮಯಕ್ಕೆ ವೇತನ ನೀಡುತ್ತಿಲ್ಲ, 3 ಅಥವಾ 4 ತಿಂಗಳಿಗೊಮ್ಮೆ ವೇತನ ನೀಡುತ್ತಿದ್ದಾರೆ. ಜೊತೆಗೆ ಇವರಿಗೆ ಇ.ಎಸ್.ಐ. ಮತ್ತು ಪಿ.ಎಫ್ ವಂತಿಗೆ ಹಣದಲ್ಲಿ ಗುತ್ತಿಗೆದಾರರು ವಂಚನೆ ಮಾಡುತ್ತಿದ್ದಾರೆ ಮತ್ತು ಸರ್ಕಾರ ನಿಗದಿಪಡಿಸಿರುವ ಕನಿಷ್ಠ ವೇತನವನ್ನು ನೀಡುತ್ತಿಲ್ಲ. ಈ ರೀತಿಯಾಗಿ ಗುತ್ತಿಗೆದಾರರ ವಂಚನೆಗೆ ಬಲಿಯಾಗಿ ಸಂಕಷ್ಟದಲ್ಲಿ ಜೀವನ ಮಾಡುತ್ತಿದ್ದಾರೆ. ಒಂದು ರೀತಿಯಲ್ಲಿ ಗುತ್ತಿಗೆ ಪದ್ದತಿ ಜೀತಪದ್ಧತಿಯಾಗಿದೆ.

ಇದನ್ನು ಗಂಭೀರವಾಗಿ ಪರಿಗಣಿಸಿರುವ ಕರ್ನಾಟಕ ರಾಜ್ಯ ಕರ್ಮಚಾರಿಗಳ ಆಯೋಗವು ಗುತ್ತಿಗೆ ಪದ್ಧತಿಯನ್ನು ರದ್ದು ಮಾಡಬೇಕೆಂದು ರಾಜ್ಯ ಸರ್ಕಾರದ ಅಧಿಕಾರಿಗಳ ಜೊತೆ ಮತ್ತು ಸಂಬಂಧಪಟ್ಟ ನಗರಾಭಿವೃದ್ಧಿ ಸಚಿವರು, ಹಾಗೂ ಪೌರಾಡಳಿತ ಸಚಿವರುಗಳ ಜೊತೆಯಲ್ಲಿ ಸಭೆಯನ್ನು ಮಾಡಿ ಚರ್ಚೆ ನಡೆಸಿದೆ. ಹರಿಯಾಣ ರಾಜ್ಯಕ್ಕೆ ಭೇಟಿ ನೀಡಿ ಸಫಾಯಿ ಕರ್ಮಚಾರಿಗಳಿಗೆ ಆ ರಾಜ್ಯವು ಜಾರಿಗೊಳಿಸಿರುವ ಯೋಜನೆಗಳನ್ನು ಅಧ್ಯಯನ ಮಾಡಿದೆ. ಜೊತೆಗೆ ಹರಿಯಾಣ ಸರ್ಕಾರವು ಸ್ಥಳೀಯ ಸಂಸ್ಥೆಗಳಲ್ಲಿ ಪೌರ ಕಾರ್ಮಿಕರ ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸಿ ಆಯಾ ಸ್ಥಳೀಯ ಸಂಸ್ಥೆಗಳಿಂದಲೇ ವೇತನ ಪಾವತಿ ಮಾಡುವಂತೆ ದಿನಾಂಕ 26–06–2014 ರಂದು ಜಾರಿಗೊಳಿಸಿರುವ ಸರ್ಕಾರಿ ಆದೇಶವನ್ನು ಪಡೆಯಲಾಗಿದೆ.

ಆದೇಶವನ್ನು ನಮ್ಮ ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳ ಜೊತೆ ಸಭೆಯನ್ನು ನಡೆಸಿ ಹರಿಯಾಣ ಸರ್ಕಾರದ ಮಾದರಿಯಲ್ಲಿ ಕರ್ನಾಟಕ ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸಿ ಆಯಾ ಸ್ಥಳೀಯ ಸಂಸ್ಥೆಗಳ ವತಿಯಿಂದಲೇ ವೇತನ ಪಾವತಿ ಮಾಡುವಂತೆ 2015–16 ನೇ ಸಾಲಿನ ಬಜೆಟ್ ಭಾಷಣದಲ್ಲಿ ಘೋಷಣೆ ಮಾಡಬೇಕೆಂದು ಒತ್ತಾಯ ಮಾಡಲಾಗಿದೆ. ಈ ವಿಷಯವನ್ನು ಪರಿಶೀಲಿಸುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ.

ಜೊತೆಗೆ ರಾಜ್ಯದಲ್ಲಿ ಸುಮಾರು 1.20 ಸಾವಿರ ಜನ ಸಫಾಯಿ ಕರ್ಮಚಾರಿಗಳು ಸ್ಥಳೀಯ ಸಂಸ್ಥೆಗಳು ಕಾರ್ಖಾನೆಗಳು, ಆಸ್ಪತ್ರೆಗಳು ಮತ್ತು ಖಾಸಗೀ ಕ್ಷೇತ್ರಗಳಲ್ಲಿ ದುಡಿಯುತ್ತಿದ್ದಾರೆ. ರಾಜ್ಯದಲ್ಲಿ ಇವರ ಜನಸಂಖ್ಯೆಯು ಸುಮಾರು 8 ಲಕ್ಷದಷ್ಟು ಇದೆ. ಇವರು ಸಾಮಾಜಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ ಮತ್ತು ಶೈಕ್ಷಣಿಕವಾಗಿ ಬಹಳಷ್ಟು ಹಿಂದುಳಿದಿದ್ದಾರೆ. ಇವರ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದ ಸಫಾಯಿ ಕರ್ಮಚಾರಿ ಹಣಕಾಸು ಕಾರ್ಪೋರೇಶನ್ ನಿಂದ ರೂ 300 ಕೋಟಿಗಳ ಅನುದಾನ, 2013-14 ನೇ ಸಾಲಿನಲ್ಲಿ ರಾಜ್ಯ ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ ಬಂದಿದೆ.

ಗುಜರಾತ್ ಸರ್ಕಾರವು ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮವನ್ನು ರಚನೆಮಾಡಿ ಇದರ ಮುಖಾಂತರ ಸಫಾಯಿ ಕರ್ಮಚಾರಿಗಳ ಸರ್ವಾಂಗೀಣ ಅಭಿವೃದ್ಧಿಯನ್ನು ಮಾಡುತ್ತಿದೆ. ಇದರಂತೆ ನಮ್ಮ ರಾಜ್ಯದಲ್ಲಿ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ರಚನೆ ಮಾಡಿ ಇದರ ಮುಖಾಂತರ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿಯನ್ನು ಮಾಡಲು ಅವಕಾಶವಿರುತ್ತದೆ. ಈ ಯೋಜನೆಯನ್ನು ಪ್ರಸಕ್ತ 2015-16 ನೇ ಸಾಲಿನ ಬಜೆಟ್‌ನಲ್ಲಿ ಘೋಷಣೆ ಮಾಡಬೇಕೆಂದು ಕೋರಿಕೆಯನ್ನು ಸಲ್ಲಿಸಲಾಗಿದೆ. ಈ ಕೋರಿಕೆಯನ್ನು ಮನ್ನಿಸಿ ದಿನಾಂಕ 05-03-2015 ರಂದು ಮುಖ್ಯಮಂತ್ರಿಗಳು 2015-16 ನೇ ಸಾಲಿನ ಆಯವ್ಯಯದಲ್ಲಿ ಪರಿಗಣಿಸುವಂತೆ ಸಮಾಜ ಕಲ್ಯಾಣಾಧಿಕಾರಿಗಳಿಗೆ ಆದೇಶ ನೀಡಿದರು.

ಜೊತೆಗೆ ಪೌರ ಕಾರ್ಮಿಕರ ಮಕ್ಕಳಿಗೆ ಉನ್ನತ ವ್ಯಾಸಂಗದವರೆವಿಗೂ ವಿದ್ಯಾಭ್ಯಾಸದ ಪೂರ್ಣ ಆರ್ಥಿಕ ವೆಚ್ಚವನ್ನು ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳು ಭರಿಸಬೇಕು. ಇತ್ಯಾದಿ ವಿಷಯಗಳನ್ನು ಘೋಷಣೆ ಮಾಡುವ ಆಶಯವಿದೆ ಎಂದು ಆಯೋಗ ತಿಳಿಸಿದೆ.

ಬಾಬು:ಜಿಪಿಆರ್

## ಪೌರಾಡಳಿತ ನಿರ್ದೇಶನಾಲಯ ಮೇಲ್ದರ್ಜೆಗೇರಿಸುವ ಬಗ್ಗೆ ಸಮಿತಿ ವರದಿ

ಬೆಂಗಳೂರು, ಮಾರ್ಚ್ 7, (ಕರ್ನಾಟಕ ವಾರ್ತೆ)

ಪೌರಾಡಳಿತ ನಿರ್ದೇಶನಾಲಯವನ್ನು ಆಯುಕ್ತಾಲಯವನ್ನಾಗಿ ಮೇಲ್ದರ್ಜೆಗೇರಿಸುವಿಕೆ ಶಿಫಾರಸ್ಸು ಮಾಡಲು ಸರ್ಕಾರದ ಪರಿಣಿತ ಸಮಿತಿಯನ್ನು ರಚಿಸಲಾಗಿದ್ದು, ಈ ಸಮಿತಿಯ ಅಧ್ಯಕ್ಷ ಶ್ರೀ ಜ್ಯೋತಿರಾಮಲಿಂಗಂ, ಶ್ರೀ ಕೆ. ಎಸ್. ರಾಯಕರ್, ಶ್ರೀ ಎಂ.ಎ. ಹೆಗಡೆ, ಶ್ರೀ ಪ್ರಾಣಲಿಂಗ ಶಿವಸಾಲಿ ಅವರು ಸದಸ್ಯರಾಗಿದ್ದರು. ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳು ದಿನಾಂಕ 3-3-2015 ರಂದು ಅಂತಿಮ ವರದಿಯನ್ನು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳು, ವಕ್ಫ್, ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಸಮ್ಮುಖದಲ್ಲಿ ಮುಖ್ಯಮಂತ್ರಿಗಳಿಗೆ ಹಸ್ತಾಂತರಿಸಿದರು.

ಬಾಬು/ಕೆಎಂ

## ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ:
## ತೀವ್ರ ಪ್ರಚಾರಾಂದೋಲನ ಕೈಗೊಳ್ಳಲು ವಾರ್ತಾಧಿಕಾರಿಗಳಿಗೆ ಸೂಚನೆ

ಬೆಂಗಳೂರು, ಮಾರ್ಚ್ 7:

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಜನಗಣತಿಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ತೀವ್ರ ಪ್ರಚಾರಾಂದೋಲನವನ್ನು ಕೈಗೊಳ್ಳಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಡಾ: ಶಾಲಿನಿ ರಜನೀಶ್ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ ಸೂಚಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಇಂದು ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಸಾಮಾನತೆಯನ್ನು ಸಾಧಿಸಲು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಅತ್ಯಾವಶ್ಯಕವಾಗಿದ್ದು, ಈ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅವರು ಸಂಕ್ಷಿಪ್ತವಾಗಿ ವಿವರಿಸಿದರು. ಪ್ರಚಾರಾಂದೋಲನಕ್ಕೆ ಸಂಬಂಧಿಸಿದಂತೆ ಸೂಕ್ತ ಯೋಜನೆಯನ್ನು ರೂಪಿಸಲು ಸೂಚಿಸಿದ ಅವರು, ಸಮೀಕ್ಷೆಯನ್ನು ಯಶಸ್ವಿಯಾಗಿ ಕೈಗೊಳ್ಳಲು ಎಲ್ಲರೂ ಸಹಕರಿಸುವಂತೆ ಕೋರಿದರು.

ಸಭೆಯಲ್ಲಿ ಸಮೀಕ್ಷೆಯ ವಿಶೇಷಾಧಿಕಾರಿ ಶ್ರೀ ಡಿ.ಎನ್.ನಾಯಕ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರಾದ ಶ್ರೀ ಎನ್.ಆರ್.ವಿಶುಕುಮಾರ್ ಹಾಜರಿದ್ದರು.

ಛಾಯಾಚಿತ್ರ ಲಗತ್ತಿಸಿದೆ.